**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 37/2021**

**ಚಾ.ಸಾ. :- 05**
**ಪ್ರಾ.ಸಾ. :- 02**

| | |
|---|---|
| ಹೆಸರು | : ಶಿವಲಿಂಗಪ್ಪ |
| ತಂದೆಯ ಹೆಸರು | : ಶಿವಣ್ಣ |
| ವಯಸ್ಸು | : 49 ವರ್ಷ |
| ಉದ್ಯೋಗ | : ಕೂಲಿ |
| ವಾಸಸ್ಥಳ | : ಬಾಬುರಾಯನಕೊಪ್ಪಲು. |

**ಪ್ರಮಾಣೀಕರಿಸಲಾದ ದಿನಾಂಕಃ- 02.06.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು. ಸದರಿ ಮಹಜರ್ ನಲ್ಲಿ ಪೊಲೀಸರು ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತಾರೆ. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ.

ಅದೇ ದಿನ ಪೊಲೀಸ್ ಠಾಣಾ ಆವರಣದಲ್ಲಿ ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ಪಂಚರ ಸಮಕ್ಷಮ ಮಹಜರ್ ಬರೆದಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು

ಗುರುತಿಸಲಾಯಿತು. ಸದರಿ ದಾಖಲೆಗೆ ಸಹಿ ಮಾಡುವಾಗ ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

*(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)*

**ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :**

ದಿನಾಂಕಃ 12.10.2020 ರಂದು ಪೊಲೀಸರು ನನ್ನ ಸಮಕ್ಷಮ ಪೊಲೀಸ್ ಠಾಣಾ ಆವರಣದಲ್ಲಿ ನಿಪಿ-4 ರ ಮಹಜರ್ ಬರೆದಿದ್ದು, ಆ ಸಮಯದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 1 ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿ ಸಹ ಹಾಜರಿದ್ದರು ಎಂದರೆ ಸರಿಯಲ್ಲ.

ನಿಪಿ-4 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ಪೊಲೀಸರು ಹೇಳಿದ ಕಾರಣ ನಾನು ಸಹಿ ಮಾಡಿರುತ್ತೇನೆ. ಮಹಜರನ್ನು ನನಗೆ ಓದಿ ಹೇಳಿರುವುದಿಲ್ಲ. ಮಹಜರಿನಲ್ಲಿ ಏನು ಬರೆದಿರುತ್ತದೆ ಎಂದು ನನಗೆ ತಿಳಿದಿಲ್ಲ.

**ಮರು ವಿಚಾರಣೆ :- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**